# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 82 ವೆಚ್ಚ 6/2022 ಇ

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:05.02.2022

ಇಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಆರ್ಥಿಕ ಇಲಾಖೆ, ವಿಧಾನಸೌಧ,
ಬೆಂಗಳೂರು

ರವರಿಗೆ:
ಖಜಾನೆ ಆಯುಕ್ತರು,
ಖಜಾನೆ ಆಯುಕ್ತಾಲಯ, 5 & 6 ನೇ ಮಹಡಿ,
ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-560001

ಮಾನ್ಯರೆ,

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ರಾಜ್ಯ ವಲಯದಡಿ ಲಭ್ಯವಿರುವ ಅನುದಾನದಿಂದ ಬಾಕಿ ವೇತನ ಸೆಳೆಯಲು ಸಹಮತಿ ಕೋರಿರುವ ಬಗ್ಗೆ

ಉಲ್ಲೇಖ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಂದ ಸ್ವೀಕೃತವಾಗಿರುವ ಪತ್ರಗಳು

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಇತರೆ ಇಲಾಖೆಗಳಲ್ಲಿ ವಿವಿದ ಕಾರಣಗಳಿಂದ ಅಂದರೆ ರಜೆ ಮಂಜೂರಾತಿ, ವೇತನ ಬಡ್ತಿ, ನಿವೃತ್ತ ಮತ್ತು ಪೌತಿಯಾಗಿರುವ ಸಿಬ್ಬಂದಿಯವರ ಅವಲಂಬಿತರಿಗೆ ಬಾಕಿ ವೇತನವನ್ನು ಪಾವತಿಸಬೇಕಾಗಿರುವುದರಿಂದ ಲಭ್ಯವಿರುವ ಅನುದಾನದಿಂದ ಸೆಳೆಯಲು ಸುತ್ತೋಲೆ ಸಂಖ್ಯೆ: ಆಇ 01 ಟಿಎಫ್‌ಪಿ 2021 ದಿನಾಂಕ:3.8.2021ರಲ್ಲಿನ ಷರತ್ತನ್ನು ಸಡಿಲಗೊಳಿಸಿ ಬಾಕಿ ವೇತನವನ್ನು ಸೆಳೆಯಲು ಅವಕಾಶ ನೀಡುವಂತೆ ಸಂಬಂಧಿಸಿದ ಖಜಾನಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಪ್ರಸ್ತಾವಿಸಿರುತ್ತಾರೆ.

| ಕ್ರ.ಸಂ | ಜಿಲ್ಲಾ/ತಾಲ್ಲೂಕು ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ನೀಡಿರುವ ಸಮಜಾಯಿಷಿ |
|---|---|---|---|
| 1 | ಚಿತ್ರದುರ್ಗ | 2210-00-101-0-35-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 2 | ಉಡುಪಿ | 2202-00-101-0-31-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 3 | ಕೊರಟಗೆರೆ | 2515-00-102-0-61-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 4 | ಕೊಪ್ಪಳ | 2515-00-101-0-26-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 5 | ಕೊಡಗು | 2202-00-101-0-31-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 6 | ಸೋಮವಾರಪೇಟೆ | 2435-00-101-0-61-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 7 | ತುಮಕೂರು | 2406-00-101-0-26-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |

| | | | |
|---|---|---|---|
| 8 | ಕಲಬುರಗಿ | 2059-00-101-0-26-005<br>2515-00-101-0-28-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 9 | ನರಗುಂದ | 2515-00-102-0-61-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 10 | ವಿಜಯಪುರ | 2202-00-102-0-62-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 11 | ಬಾಗಲಕೋಟೆ | 2515-00-102-0-61-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 12 | ಧಾರವಾಡ | 2406-00-101-0-26-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |
| 13 | ಕೋಲಾರ | 2435-00-101-0-61-005 | ಅಧಿಕಾರಿ/ಸಿಬ್ಬಂದಿಯವರ ಬಾಕಿ ವೇತನವನ್ನು ಲಭ್ಯ ವಿರುವ ಅನುದಾನದಿಂದ ಸೆಳೆಯಲು |

3. ರಾಜ್ಯ ವಲಯದ ಲೆಕ್ಕ ಶೀರ್ಷಿಕೆ 3054-80-001-0-02ರಡಿ ಅಧಿಕಾರಿ/ಸಿಬ್ಬಂದಿಯವರ ವೇತನವನ್ನು ಲಭ್ಯವಿರುವ ಅನುದಾನದಿಂದ ಸೆಳೆಯಲು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಇವರು ಪ್ರಸ್ತಾವನೆ ಸಲ್ಲಿಸಿದ್ದು ಸದರಿ ಲೆಕ್ಕ ಶೀರ್ಷಿಕೆಯಡಿ ಹಿಂದಿನ ಸಾಲಿನ ವೇತನವನ್ನು ಸೆಳೆಯಲು ಬಿಲ್ಲುಗಳನ್ನು ಮಾನ್ಯ ಮಾಡುವಂತೆ ರಾಜ್ಯ ಹುಜೂರು ಖಜಾನೆಗೆ ತಿಳಿಸುವಂತೆ ಕೋರಲಾಗಿದೆ.

ಪ್ರಸ್ತಾವನೆಯು ಬಾಕಿ ವೇತನ/ಇತರೆ ವೆಚ್ಚವನ್ನು ಲಭ್ಯವಿರುವ ಅನುದಾನದಿಂದ ಭರಿಸಲು ಹಾಗೂ ಇದಕ್ಕಾಗಿ ಹೆಚ್ಚುವರಿ ಅನುದಾನವನ್ನು ಕೋರದಿರುವ ಷರತ್ತನ್ನು ವಿಧಿಸಿ ಬಾಕಿ ವೇತನವನ್ನು ಸೆಳೆಯಲು ಸುತ್ತೋಲೆಯ ಷರತ್ತನ್ನು ಸಡಿಲಿಸಿ ಸಹಮತಿಸಿದೆ. ಅದರಂತೆ ಬಾಕಿ ವೇತನ/ಇತರೆ ವೆಚ್ಚ ಸೆಳೆಯಲು ಸಲ್ಲಿಸುವ ಬಿಲ್ಲುಗಳನ್ನು ಮಾನ್ಯ ಮಾಡುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಲು ಕೋರಲಾಗಿದೆ.

ತಮ್ಮ ನಂಬುಗೆಯ,

(ಶ್ರೀಕೃಷ್ಣ ಎನ್ ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿಪಂ) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಪ್ರತಿ:

1. ಉಪ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
2. ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು/ ಕಾರ್ಯನಿರ್ವಾಹಕ ಅಧಿಕಾರಿಗಳು
3. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನೆ ಅಧಿಕಾರಿಗಳಿಗೆ ಸಲ್ಲಿಸುವ ಬಿಲ್ಲುಗಳನ್ನು ಮಾನ್ಯ ಮಾಡುವ ಬಗ್ಗೆ